



ಅರುಣ ಪಿ. ಭಟ್ಟ

## ವಾರಭವಿಷ್ಯ: 01.06.2023ರಿಂದ 07.06.2023ವರೆಗೆ




ನಿಮ್ಮ ಬೌದ್ಧಿಕ ಶಕ್ತಿಯಿಂದ ವಿಶೇಷ ಗೌರವಕ್ಕೆ ಪಾತ್ರರಾಗುತ್ತೀರಿ. ಮಕ್ಕಳು ಯಶಸ್ಸು ಪಡೆಯಲು ಪ್ರೋತ್ಸಾಹ ನೀಡಲಿದ್ದೀರಿ. ಹಣಕಾಸು ವಿಚಾರದಲ್ಲಿ ಪ್ರಗತಿ ಇದೆ. ಸಾಲ ಮರುಪಾವತಿಗೆ ಸಂಬಂಧಿಸಿದಂತೆ ಸಮಸ್ಯೆಗಳು ಎದುರಾಗಬಹುದು. ಪ್ರತಿಸ್ಪರ್ಧಿಗಳು ನಿಮ್ಮನ್ನು ಮಣಿಸಲು ಬಹಳ ಶ್ರಮಿಸುತ್ತಾರೆ. ಪ್ರೀತಿಪಾತ್ರರ ಜತೆಗೆ ಉತ್ತಮ ಸಮಯ ಕಳೆಯಲಿದ್ದೀರಿ. ಶುಭದಿನ 06. ಶ್ರೀರಾಮರಕ್ಷಾ ಸ್ತೋತ್ರ ಪಠಿಸಿರಿ.




ಜೀವನ ಮಟ್ಟ ಮೇಲಕ್ಕೆ ಏರಲಿದೆ. ದೈನಂದಿನ ಚಟುವಟಿಕೆಗಳನ್ನು ಇನ್ನಷ್ಟು ಉತ್ಸಾಹದಿಂದ ಮಾಡಲಿದ್ದೀರಿ. ವೈವಾಹಿಕ ಜೀವನದ ಕಡೆಗೆ ಹೆಚ್ಚು ಲಕ್ಷ್ಯ ನೀಡಿ. ಸಂಗಾತಿಯ ಅಗತ್ಯಗಳಿಗೆ ಸ್ಪಂದಿಸಿ. ಪ್ರೀತಿಪಾತ್ರರ ಜತೆಗಿನ ಬಾಂಧವ್ಯ ಗಟ್ಟಿಯಾಗಲಿದೆ. ತುಂಬ ಸಂತೋಷದಿಂದ ಸಮಯ ಕಳೆಯಲಿದ್ದೀರಿ. ಆರೋಗ್ಯ ಉತ್ತಮ ಸ್ಥಿತಿಯಲ್ಲಿ ಇರುತ್ತದೆ. ಶುಭದಿನ 04. ಸೌಂದರ್ಯ ಲಹರಿ ಪಠಿಸಿರಿ.




ಉದ್ಯೋಗದಲ್ಲಿ ನಿಮ್ಮ ಹಿಡಿತ ಗಟ್ಟಿಯಾಗಲಿದೆ. ಆತ್ಮವಿಶ್ವಾಸ ಹೆಚ್ಚಾಗಲಿದೆ. ಸೋದರ ಸೋದರಿಯರ ಜತೆಗೆ ಬಾಂಧವ್ಯ ಗಟ್ಟಿಯಾಗಲಿದೆ. ಈ ವಾರ ನಿಮ್ಮ ಪಾಲಿಗೆ ಅದೃಷ್ಟ ಕೈ ಹಿಡಿಯಲಿದೆ. ಆರೋಗ್ಯ ಉತ್ತಮವಾಗಿರುತ್ತದೆ. ಪೋಷಕರ ಅಗತ್ಯಗಳನ್ನು ಪೂರೈಸಲಿದ್ದೀರಿ. ವೈಯಕ್ತಿಕ ಸಂಬಂಧದಲ್ಲಿನ ವೈಷಮ್ಯ, ವಾಗ್ವಾದಗಳನ್ನು ನಿವಾರಿಸಿಕೊಳ್ಳುವಿರಿ. ಶುಭದಿನ 02. ಲಕ್ಷ್ಮೀನರಸಿಂಹ ಜಪ ಮಾಡಿರಿ.




ಆಸ್ತಿ ವ್ಯವಹಾರಗಳಲ್ಲಿ ಪ್ರಗತಿ ಕಾಣಿಸಿಕೊಳ್ಳಲಿದೆ. ವೃತ್ತಿ ಅಗತ್ಯಗಳಿಗೆ ಈ ಪ್ರಯಾಣ ಅನಿವಾರ್ಯ ಆಗಲಿದೆ. ನಿಮ್ಮ ಧೈರ್ಯ ಹೆಚ್ಚಾಗಲಿದೆ. ಧಾರ್ಮಿಕ ಹಾಗೂ ಸಾಮಾಜಿಕ ಕಾರ್ಯಕ್ರಮಗಳಲ್ಲಿ ಆಸಕ್ತಿ ಹೆಚ್ಚಾಗಲಿದೆ. ಸ್ಪರ್ಧಾತ್ಮಕ ಹಾಗೂ ಕ್ರೀಡಾ ಕ್ಷೇತ್ರದಲ್ಲಿ ಇರುವವರಿಗೆ ಕನಸಿನ ಗುರಿ ಮುಟ್ಟಲು ಸೂಕ್ತ ಅವಕಾಶ ದೊರೆಯಲಿದೆ. ಹಣಕಾಸು ವಿಷಯದಲ್ಲಿ ಲಾಭ ಇದೆ. ಶುಭದಿನ 07. ವಿಷ್ಣು ಸಹಸ್ರನಾಮ ಪಠಿಸಿರಿ.




ಉದ್ಯೋಗದಲ್ಲಿ ಯಶಸ್ಸು ಪಡೆಯಲಿದ್ದೀರಿ. ಕೌಟುಂಬಿಕ ವಿಷಯಗಳಲ್ಲಿ ಮುಖ್ಯ ತೀರ್ಮಾನ ಮಾಡಲಿದ್ದೀರಿ. ಇತ್ತೀಚೆಗೆ ನೀವು ಅನುಭವಿಸಿದ ನಷ್ಟವನ್ನು ಮತ್ತೆ ಭರಿಸಲು ಪ್ರಯತ್ನವನ್ನು ಮಾಡಲಿದ್ದೀರಿ. ಸಂಗಾತಿ ಹಾಗೂ ಮಕ್ಕಳ ಜತೆಗೆ ಉತ್ತಮ ಸಮಯ ಕಳೆಯಲಿದ್ದೀರಿ. ಸಮಾಜದಲ್ಲಿ ಉತ್ತಮ ಹೆಸರು, ಕೀರ್ತಿಯನ್ನು ಪಡೆಯಲಿದ್ದೀರಿ. ಶುಭದಿನ 06. ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.




ಪೋಷಕರ ಜತೆಗೆ ಬಾಂಧವ್ಯ ಗಟ್ಟಿಯಾಗಲಿದೆ. ಬಹಳ ಸಮಯದ ನಂತರ ಆಸ್ತಿ ವ್ಯವಹಾರದಲ್ಲಿ ಪ್ರಗತಿ ಕಾಣಲಿದೆ. ಸ್ಥಿರವಾದ ಆರೋಗ್ಯ ಕಾಪಾಡಿಕೊಳ್ಳುವುದು ಸವಾಲಾಗಿ ಪರಿಣಮಿಸಲಿದೆ. ಕಾನೂನು ವ್ಯಾಜ್ಯಗಳು ನಡೆಯುತ್ತಿದ್ದಲ್ಲಿ ಪ್ರತಿಸ್ಪರ್ಧಿಗಳ ವಿರುದ್ಧ ನಿಮ್ಮ ಕೈ ಮೇಲಾಗಲಿದೆ. ಪ್ರೀತಿ ಪ್ರೇಮದಲ್ಲಿ ಇರುವವರು ಸಂಗಾತಿಯ ಸಿಟ್ಟನ್ನು ಸಹಿಸಬೇಕಾಗುತ್ತದೆ. ಶುಭದಿನ 02. ವೆಂಕಟೇಶ್ವರ ಸ್ತೋತ್ರ ಪಠಿಸಿರಿ.




ಹಣಕಾಸು ಲಾಭ ಗಳಿಸುವ ಯೋಗ ಇದೆ. ನಿಮ್ಮ ಜ್ಞಾನ ಹಾಗೂ ಬೌದ್ಧಿಕ ಸಾಮರ್ಥ್ಯ ವೃದ್ಧಿ ಆಗಲಿದೆ. ಸಹೋದ್ಯೋಗಿಗಳ ಜತೆ ಉತ್ತಮ ಬಾಂಧವ್ಯ ಇರಲಿದೆ. ಸಂತಾನ ಅಪೇಕ್ಷಿತರಿಗೆ ಶುಭ ಸುದ್ದಿ ಕೇಳುವ ಯೋಗ ಇದೆ. ಶೈಕ್ಷಣಿಕ ಕ್ಷೇತ್ರದಲ್ಲಿ ಪ್ರಗತಿ ಕಾಣಲಿದ್ದೀರಿ. ಆದರೆ ಅದಕ್ಕಾಗಿ ಪ್ರಾಮಾಣಿಕ ಪ್ರಯತ್ನವನ್ನು ಮಾಡಬೇಕು. ವಾರಾಂತ್ಯಕ್ಕೆ ಬಿಡುವಿಲ್ಲದ ಕೆಲಸ ಇರುತ್ತದೆ. ಶುಭದಿನ 04. ಚಂಡಿ ಪಾರಾಯಣ ಮಾಡಿರಿ.




ಉದ್ಯೋಗ ಸ್ಥಳದಲ್ಲಿ ನಿಮಗೆ ಅನುಕೂಲಕರವಾದ ಸನ್ನಿವೇಶ ಇರಲಿದೆ. ದೈಹಿಕ ಕ್ಷಮತೆ ಉತ್ತಮವಾಗಿರುತ್ತದೆ. ಆರೋಗ್ಯ ಸಮಸ್ಯೆಗಳು ಇದ್ದಲ್ಲಿ ನಿವಾರಣೆ ಆಗುತ್ತವೆ. ಸಮಾಜದಲ್ಲಿ ಪ್ರಭಾವಿಗಳಾಗಿ ಹೊರಹೊಮ್ಮಲಿದ್ದೀರಿ. ಉದ್ಯಮಿಗಳಿಗೆ, ವ್ಯಾಪಾರಿಗಳಿಗೆ ಲಾಭದ ಪ್ರಮಾಣ ಹೆಚ್ಚಾಗಲಿದೆ. ವಿದ್ಯಾರ್ಥಿಗಳಿಗೆ ಶೈಕ್ಷಣಿಕ ವಿಚಾರದಲ್ಲಿ ಪ್ರಗತಿ ಇದೆ. ಶುಭದಿನ 06. ದತ್ತಗುರು ಚರಿತ್ರೆ ಪಠಿಸಿರಿ.




ಈ ಅವಧಿಯಲ್ಲಿ ಅದೃಷ್ಟ ನಿಮ್ಮ ಪಾಲಿಗೆ ಇರಲಿದೆ. ರಾಜಕೀಯ ಕ್ಷೇತ್ರದಲ್ಲಿ ಇರುವವರಿಗೆ ಪ್ರಗತಿ ಇದೆ. ಅದೇ ರೀತಿ ಸರ್ಕಾರಿ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುವವರಿಗೆ ಏಳ್ಗೆ ಇದೆ. ಆರೋಗ್ಯ ಉತ್ತಮವಾಗಿರುತ್ತದೆ. ಅನುಭವಿಗಳ ಮಾರ್ಗದರ್ಶನದಿಂದ ಹೊಸ ಕೌಶಲ, ತಂತ್ರಗಳನ್ನು ಕಲಿಯಲು ಸಾಧ್ಯವಾಗುತ್ತದೆ. ಮಕ್ಕಳ ಪ್ರಗತಿಯಿಂದ ಮನಸ್ಸಿಗೆ ಸಂತೋಷವಾಗುತ್ತದೆ. ಶುಭದಿನ 02. ಲಲಿತಾ ಸಹಸ್ರನಾಮ ಪಠಿಸಿರಿ.




ಹೂಡಿಕೆ ವಿದೇಶ ವ್ಯವಹಾರಗಳು ಲಾಭದಾಯಕವಾಗಿ ಇರಲಿವೆ. ಕಾನೂನು ವ್ಯವಹಾರಗಳಲ್ಲಿ ನಿಮ್ಮ ಕೈ ಮೇಲಾಗಲಿದೆ. ಪ್ರತಿಸ್ಪರ್ಧಿಗಳು ನಿಮಗೆ ಸವಾಲೊಡ್ಡಬಹುದು. ಆದ್ದರಿಂದ ಈ ಬಗ್ಗೆ ಎಚ್ಚರಿಕೆಯಿಂದ ಇರಬೇಕು. ದೊಡ್ಡ ಸಂಸ್ಥೆಗಳ ಜತೆಗೆ ವೃತ್ತಿಪರ ಒಪ್ಪಂದಕ್ಕೆ ಬರುವ ಅವಕಾಶಗಳು ಇವೆ. ಕುಟುಂಬದವರ ಜೊತೆ ಸಂತೋಷವಾದ ಸಮಯ ಕಳೆಯಲಿದ್ದೀರಿ. ಶುಭದಿನ 05. ಗಣಪತಿಗೆ ದೂರ್ವಾರ್ಚನೆ ಮಾಡಿರಿ.




ಸಂಗಾತಿ ಜತೆಗೆ ಸಂಬಂಧ ಗಾಢವಾಗಲಿದೆ. ಕೌಟುಂಬಿಕ ಜೀವನದಲ್ಲಿ ಕೊಟ್ಟ ಮಾತಿನಂತೆ ನಡೆದುಕೊಳ್ಳಲಿದ್ದೀರಿ. ಸಮಾಜದ ಪ್ರಮುಖರು ನಿಮ್ಮ ಕಠಿಣ ಪರಿಶ್ರಮವನ್ನು ಗುರುತಿಸಲಿದ್ದಾರೆ. ಸಂಸ್ಥೆಗಳಲ್ಲಿ ಮುಖ್ಯ ಹುದ್ದೆಯಲ್ಲಿ ಇರುವವರಿಗೆ ಬಿಗಿ ಹಿಡಿತಕ್ಕೆ ಅವಕಾಶ ದೊರೆಯಲಿದೆ. ಆರೋಗ್ಯದಲ್ಲಿ ಏರಿಳಿತ ಇರಲಿದೆ. ಜೀವನದಲ್ಲಿ ಸಕಾರಾತ್ಮಕ ಬೆಳವಣಿಗೆ ಕಾಣಲಿದ್ದೀರಿ. ಶುಭದಿನ 03. ಲಕ್ಷ್ಮಿ ಕನಕಧಾರಾ ಸ್ತೋತ್ರ ಪಠಿಸಿರಿ.




ಸೋದರ ಸಂಬಂಧಿಗಳ ಜತೆಗೆ ಬಾಂಧವ್ಯ ಗಟ್ಟಿಯಾಗಲಿದೆ. ವೃತ್ತಿಪರ ಕಾರಣಗಳಿಗಾಗಿ ಪ್ರಯಾಣಗಳನ್ನು ಮಾಡಬೇಕಾಗುತ್ತದೆ. ಸ್ಥಿರವಾದ ಆರೋಗ್ಯ ಹಾಗೂ ದೃಢತೆ ಕಾಯ್ದುಕೊಳ್ಳುವುದು ಸವಾಲಾಗಿ ಪರಿಣಮಿಸಲಿದೆ. ವೈವಾಹಿಕ ಜೀವನ ಸಂತುಷ್ಟವಾಗಿರುತ್ತದೆ. ಕ್ರಿಯೇಟಿವ್ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುವವರಿಗೆ ಪ್ರಗತಿ ಇದೆ. ನಿರೀಕ್ಷೆ ಮಾಡಿದಂತೆಯೇ ಶುಭ ಫಲ ಸಿಗಲಿದೆ. ಶುಭದಿನ 04. ಶಿವಕವಚ ಪಠಿಸಿರಿ.